ಡಿಸೆಂಬರ್
2023

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

# ಸ್ವಚ್ಛತಾವಾಣಿ

ವಾರ್ತಾಪತ್ರ



01

## ಗ್ರಾ.ಪಂ ರಾಜ್ & ಐಟಿಬಿಟಿ ಸಚಿವರಿಂದ ಕೈಲಾಸನಗರ ತಾಂಡಾದಲ್ಲಿ ಜೆಜೆಎಂ ಯೋಜನೆ ಅನುಷ್ಠಾನಕ್ಕೆ ಅಡಿಗಲ್ಲು

ಕಲಬುರ್ಗಿ ಜಿಲ್ಲೆ ಚಿತ್ತಾಪುರಾ ತಾಲ್ಲೂಕಿನ ಕೈಲಾಸನಗರ ತಾಂಡಾಕ್ಕೆ ಭೇಟಿ ನೀಡಿದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಐಟಿ/ಬಿಟಿ ಸಚಿವರಾದ ಶ್ರೀ ಪ್ರಿಯಾಂಕ್ ಖರ್ಗೆ ರವರು ಜೆಜೆಎಂ ಯೋಜನೆಯಡಿ ಕಾರ್ಯಾತ್ಮಕ ಗೃಹ ನಳ ಸಂಪರ್ಕಕ್ಕೆ ಅಡಿಗಲ್ಲು ಹಾಕಿ ಕಾಮಗಾರಿಗೆ ಚಾಲನೆ ನೀಡಿದರು. ಈ ವೇಳೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಚುನಾಯಿತ ಸದಸ್ಯರು, ಗ್ರಾಮಸ್ಥರು ಉಪಸ್ಥಿತರಿದ್ದರು.

## ಗ್ರಾ.ಪಂ ರಾಜ್& ಐಟಿ/ಬಿಟಿ ಸಚಿವರಿಂದ ಕುಂದನೂರು ಗ್ರಾಮದಲ್ಲಿ ಜೆಜೆಎಂ ಯೋಜನೆ ಅನುಷ್ಠಾನಕ್ಕೆ ಅಡಿಗಲ್ಲು

02



ಕಲಬುರ್ಗಿ ಜಿಲ್ಲೆ ಚಿತ್ತಾಪುರ ತಾಲ್ಲೂಕಿನ ಕುಂದನೂರು ಗ್ರಾಮಕ್ಕೆ ಭೇಟಿ ನೀಡಿದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಐಟಿಬಿಟಿ ಇಲಾಖಾ ಸಚಿವರಾದ ಶ್ರೀ ಪ್ರಿಯಾಂಕ್ ಖರ್ಗೆ ರವರು ಜಲಜೀವನ್ ಮಿಷನ್ ಯೋಜನೆಯಡಿಯಲ್ಲಿ ಕಾರ್ಯಾತ್ಮಕ ಗೃಹನಳ ಸಂಪರ್ಕಕ್ಕೆ ಅಡಿಗಲ್ಲು ಹಾಕಿ ಕಾಮಗಾರಿಗೆ ಚಾಲನೆ ನೀಡಿದರು. ಈ ವೇಳೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಚುನಾಯಿತ ಸದಸ್ಯರು, ಗ್ರಾಮಸ್ಥರು ಉಪಸ್ಥಿತರಿದ್ದರು.



03

## ಮಾನ್ಯ ಸಚಿವರಿಂದ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಐಟಿಬಿಟಿ ಸಚಿವರಾದ ಶ್ರೀ ಪ್ರಿಯಾಂಕ್ ಖರ್ಗೆ ರವರು ಬೆಂಗಳೂರಿನ ವಿಕಾಸಸೌಧದಲ್ಲಿ ಗ್ರಾ.ಕು.ನೀ& ನೈ ಇಲಾಖೆಯಡಿ ಪ್ರಸ್ತುತ ಅನುಷ್ಠಾನಗೊಂಡಿರುವ ಕಾಮಗಾರಿಗಳ ಪ್ರಗತಿ ಕುರಿತು ಶ್ರೀ ಅಂಜುಮ್ ಪರ್ವೇಝ್, ಆರ್.ಡಿ.ಪಿ.ಆರ್ ಪ್ರಧಾನ ಕಾರ್ಯದರ್ಶಿ ಅವರೊಂದಿಗೆ ಚರ್ಚೆ ನಡೆಸಿದರು. ಈ ವೇಳೆ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಇಲಾಖೆಯ ನಿರ್ದೇಶಕರವರಿಂದ ಮೈಸೂರು ಜಿಲ್ಲೆಯಲ್ಲಿ ಎಸ್.ಬಿ.ಎಂ(ಗ್ರಾ), ಜೆಜೆಎಂ ಪ್ರಗತಿ ಪರಿಶೀಲನಾ ಸಭೆ

04



ಶ್ರೀ ನಾಗೇಂದ್ರ ಪ್ರಸಾದ್ ಕೆ. IAS, ನಿರ್ದೇಶಕರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಇವರು ಮೈಸೂರು ಜಿಲ್ಲಾ ಪಂಚಾಯತ್ ಮಿನಿ ಸಭಾಂಗಣದಲ್ಲಿ ಜಲ ಜೀವನ್ ಮಿಷನ್ ಹಾಗೂ ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಗಳ ಪ್ರಗತಿ ಪರಿಶೀಲನೆ ಸಭೆ ನಡೆಸಿದರು. ಸಭೆಯಲ್ಲಿ ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಅಧೀಕ್ಷಕ ಅಭಿಯಂತರರು, ಉಪ ಕಾರ್ಯದರ್ಶಿ (ಅಭಿವೃದ್ಧಿ), ಕಾರ್ಯಪಾಲಕ ಅಭಿಯಂತರರು, ಸಹಾಯಕ ಕಾರ್ಯಪಾಲಕ ಅಭಿಯಂತರರು ಹಾಗೂ ಜಿಲ್ಲಾ ಸಮಾಲೋಚಕರುಗಳು ಉಪಸ್ಥಿತರಿದ್ದರು.